ಶ್ರೀ ಆರ್.ವಿ. ದೇಶಪಾಂಡೆ (ಮಾನ್ಯ ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರು)

ಅ) ಬಂದಿದೆ.

ಆ) ಇದರ ಬಗ್ಗೆ ವಿಚಾರಣೆ ಕೈಗೊಂಡಿರುವ ಹಿನ್ನೆಲೆಯಲ್ಲಿ ವಿಚಾರಣೆ ಮುಗಿದ ನಂತರ ವಿದ್ಯಾರ್ಥಿಗಳಿಗೆ ಅನ್ಯಾಯವಾಗಿರುವ ಬಗ್ಗೆ ತಿಳಿದುಬರುತ್ತದೆ.

ಇ) ನಿಯಮಗಳನ್ವಯ ಅವ್ಯವಹಾರಗಳಿಗೆ ಅವಕಾಶವಿಲ್ಲದಂತೆ ದಾಖಲೆಗಳ ಪರಿಶೀಲನೆಯ ಕ್ರಮವನ್ನು ತೀವ್ರಗೊಳಿಸಲಾಗುವುದು.

ಈ) ಅವ್ಯವಹಾರದ ಬಗ್ಗೆ ಬಂದ ದೂರುಗಳ ಹಿನ್ನೆಲೆಯಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಆಡಳಿತಾಧಿಕಾರಿಯವರನ್ನು ನಿಲಂಬನೆಯಲ್ಲಿಟ್ಟಿದ್ದು, ಈ ಕುರಿತು ವಿಚಾರಣೆ ನಡೆಸಲು ಕ್ರಮವಹಿಸಲಾಗಿದೆ.

ಗುಡಿಸಲು ಮುಕ್ತ ನಗರ

1429(1449); ಶ್ರೀ ಗೋಪಾಲಯ್ಯ ಕೆ. (ಮಹಾಲಕ್ಷ್ಮಿ ಲೇಔಟ)

ಅ) ಬೆಂಗಳೂರು ನಗರದಲ್ಲಿರುವ ಗುಡಿಸಲು ವಾಸಿಗಳ ಸಂಖ್ಯೆ ಎಷ್ಟು;

ಆ) ಬೆಂಗಳೂರು ನಗರವನ್ನು ಗುಡಿಸಲು ಮುಕ್ತ ನಗರವನ್ನಾಗಿ ಪರಿವರ್ತಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಡಾ॥ ಎಂ.ಹೆಚ್. ಅಂಬರೀಷ್ (ವಸತಿ ಸಚಿವರು)

ಅ) ಪೌರಾಡಳಿತ ನಿರ್ದೇಶನಾಲಯ ಸಂಗ್ರಹಿಸಿರುವ ಆಶಾಕಿರಣ ಮಾಹಿತಿಯ ಪ್ರಕಾರ ಬೆಂಗಳೂರು ನಗರದಲ್ಲಿ 1,65,341 ಸಂಖ್ಯೆಯ ಕುಟುಂಬಗಳು ಗುಡಿಸಲುಗಳಲ್ಲಿ ವಾಸಿಸುತ್ತಿರುತ್ತಾರೆ.

ಆ)

- ಹುಡ್ಕೋ ಮತ್ತು ವಾಂಬೆ ಯೋಜನೆಯಡಿ 1983 ರಿಂದ 2006ರವರೆವಿಗೆ 13098 ಮನೆಗಳನ್ನು ನಿರ್ಮಿಸಲಾಗಿದೆ. ಮತ್ತು 2006ರಿಂದ ಇಲ್ಲಿಯವರೆವಿಗೆ JNNURM-BSUP ಯೋಜನೆಯಡಿ 14,410 ಮನೆಗಳನ್ನು ನಿರ್ಮಿಸಲಾಗಿದೆ.
- ಈ ಸಾಲಿನಲ್ಲಿ ಇಲ್ಲಿಯವರೆವಿಗೂ ರಾಜೀವ್ ಆವಾಸ್ ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರದಿಂದ ಬೆಂಗಳೂರು ನಗರದ ಆಯ್ದ **26** ಕೊಳಚೆ ಪ್ರದೇಶಗಳಲ್ಲಿ ಮೂಲಭೂತ ಸೌಲಭ್ಯಗಳೊಂದಿಗೆ **6763** ಮನೆಗಳನ್ನು ₹ **365.19** ಕೋಟಿಗಳ ವೆಚ್ಚದಲ್ಲಿ ನಿರ್ಮಾಣ ಮಾಡಲು **6** ಯೋಜನಾ ವರದಿಗಳಿಗೆ ಅನುಮೋದನೆ ಪಡೆದುಕೊಳ್ಳಲಾಗಿದೆ. ಹಾಗೂ ಹೆಚ್ಚುವರಿಯಾಗಿ ಬೆಂಗಳೂರು ನಗರದ ಆಯ್ದ **32** ಕೊಳಚೆ ಪ್ರದೇಶಗಳಲ್ಲಿ ಮೂಲಭೂತ ಸೌಲಭ್ಯಗಳೊಂದಿಗೆ **6223** ಮನೆಗಳನ್ನು ₹ **339.15** ಕೋಟಿಗಳ ವೆಚ್ಚದಲ್ಲಿ ನಿರ್ಮಾಣ ಮಾಡಲು 8 ಯೋಜನಾ ವರದಿಗಳಿಗೆ SLEC ಸಭೆಯಿಂದ ಅನುಮೋದನೆ ಪಡೆದುಕೊಳ್ಳಲಾಗಿದೆ.

ಆರ್.ಡಿಪಿಆರ್ ಯೋಜನೆಗಳ ಅನುಷ್ಠಾನದ ಪ್ರಗತಿ

1431(952); ಡಾ॥ ಗುರುಪಾದಪ್ಪ ನಾಗಮಾರಪಳ್ಳಿ (ಬೀದರ್)

ಅ) ಪ್ರಸಕ್ತ ಸಾಲಿನಲ್ಲಿ / ಆಯವ್ಯಯದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಒದಗಿಸಲಾಗಿರುವ ಅನುದಾನವೆಷ್ಟು? ಕೇಂದ್ರ ಸರ್ಕಾರದಿಂದ ಬಂದಿರುವ ಅನುದಾನವೆಷ್ಟು

ಆ) ಈ ಪೈಕಿ ಇಲ್ಲಿಯವರೆಗೆ ಬಿಡುಗಡೆಯಾದ ಮತ್ತು ವೆಚ್ಚ ಮಾಡಲಾದ ಹಣವೆಷ್ಟು (ಯೋಜನೆವಾರು ಮತ್ತು ಜಿಲ್ಲಾವಾರು ವೆಚ್ಚ ಮಾಡಲಾಗಿರುವ ಅನುದಾನದ ಮಾಹಿತಿ ಒದಗಿಸುವುದು)